ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ದಿನಾಂಕ: 19-11-2017


ವಾರ್ತಾಭವನ, ನಾಯರ್‌ಕೆರೆ, ಬ್ರಹ್ಮಗಿರಿ, ಉಡುಪಿ- 576101 ದೂ.ಸಂ. 2524807


# ಹಸಿವು ಮುಕ್ತ ಕರ್ನಾಟಕ ನಮ್ಮ ಗುರಿ : ಸಿದ್ದರಾಮಯ್ಯ




ಉಡುಪಿ, ನವೆಂಬರ್ 18: ರಾಜ್ಯದಲ್ಲಿ ಯಾವುದೇ ವ್ಯಕ್ತಿಯು ಹಸಿವೆಯಿಂದ ನರಳಬಾರದು ಎಂಬ ಉದ್ದೇಶದಿಂದ ರಾಜ್ಯವನ್ನು ಹಸಿವು ಮುಕ್ತ ರಾಜ್ಯವನ್ನಾಗಿ ಮಾಡುವುದು ನಮ್ಮ ಸರಕಾರದ ಉದ್ದೇಶ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಅವರು ಭಾನುವಾರ ಉಡುಪಿಯಲ್ಲಿ, ಜಿಲ್ಲಾಡಳಿತ, ಉಡುಪಿ ಜಿಲ್ಲೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಬಿ.ಆರ್.ಎಸ್.ಸ್ವಾಸ್ಥ್ಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ನಿರ್ಮಾಣಗೊಂಡಿರುವ ಕರ್ನಾಟಕ ಸರಕಾರ ಕೂಸಮ್ಮ ಶಂಭು ಶೆಟ್ಟಿ ಸ್ಮಾರಕ ಹಾಜಿ ಅಬ್ದುಲ್ಲಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ರಾಜ್ಯದಲ್ಲಿ ವಿಪಕ್ಷಗಳ ಗುರಿ ಉದ್ದೇಶ ಕಾಂಗ್ರೆಸ್ ಮುಕ್ತ ಕರ್ನಾಟಕವಂತೆ; ಆದರೆ ನಮ್ಮದು ಹಸಿವು ಮುಕ್ತ, ಬಡತನ ಮುಕ್ತ ಕರ್ನಾಟಕ. ಈ ಉದೇಶದಿಂದಲೇ

ರಾಜ್ಯ ಸರಕಾರ ಅನ್ನಭಾಗ್ಯ, ವಸತಿ ಭಾಗ್ಯ, ಕ್ಷೀರಭಾಗ್ಯ, ಕೃಷಿ ಭಾಗ್ಯಗಳಂತಹ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ ಎಂದರು.

ಅದೇ ರೀತಿ ಇಂದಿರಾಗಾಂಧಿ ಜನ್ಮಶತಮಾನೋತ್ಸವದ ಸ್ಮರಣೆಗಾಗಿ ಇಂದು ಕಡು ಬಡವನಿಗೂ ಎರಡು ಹೊತ್ತಿನ ಊಟಕ್ಕೆ ಅನುಕೂಲವಾಗುವಂತೆ , ಪ್ರತಿ ಜಿಲ್ಲೆ, ತಾಲೂಕು ಕೇಂದ್ರಗಳಲ್ಲಿ ಇಂದಿರಾ ಕ್ಯಾಂಟೀನ್ ಪ್ರಾರಂಭಿಸಲಾಗುತ್ತಿದೆ ಎಂದು ಅವರು ಹೇಳಿದರು.

ಬೆಂಗಳೂರಿನಲ್ಲಿ ಈಗಾಗಲೇ 200 ಇಂದಿರಾ ಕ್ಯಾಂಟೀನ್‌ಗಳನ್ನು ಪ್ರಾಂಭಿಸಲಾಗಿದ್ದು, ಜನವರಿ ಒಂದರಿಂದ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ 300 ಇಂದಿರಾ ಕ್ಯಾಂಟೀನ್ ಪ್ರಾರಂಭ ಮಾಡುತ್ತೇವೆ. ಒಂದು ಲಕ್ಷ ಜನರಿಗೆ ಒಂದು ಕ್ಯಾಂಟಿನ್ ಯೋಜನೆ ನಮ್ಮ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಪರಿವರ್ತನೆ ನಮ್ಮ ಮಾನವೀಯ ಸಂಬಂಧಗಳಲ್ಲಾಗಬೇಕು. ಮಾನವರಲ್ಲಿ ಮನುಷ್ಯತ್ವ, ಮಾನವೀಯತೆಯು ಪರಿವರ್ತನೆ ಆಗಬೇಕು. ನಮ್ಮ ಸರ್ಕಾರ ಕೃಷಿಕರ, ಬಡವರ, ಕಾರ್ಮಿಕರ, ಮಹಿಳೆಯರ ಪರವಾಗಿ ಕೆಲಸ ಮಾಡುತ್ತಿದೆ. ಸಮಾಜದಲ್ಲಿ ಸಾಮರಸ್ಯ, ಸಹಬಾಳ್ವೆ, ಪ್ರತಿಯೊಬ್ಬರಿಗೂ ಶಿಕ್ಷಣ, ವಸತಿ ಒದಗಿಸುವುದು ಸರ್ಕಾರದ ಮುಖ್ಯ ಉದ್ದೇಶ ಎಂದು ಮುಖ್ಯ ಮಂತ್ರಿ ತಿಳಿಸಿದರು.

ಉಡುಪಿಯಲ್ಲಿ ಉದ್ಘಾಟನೆಗೊಂಡ 200 ಹಾಸಿಗೆಗಳ ಡಾ, ಕೂಸಮ್ಮ ಶಂಭು ಶೆಟ್ಟಿ ಸ್ಮಾರಕ ಹಾಜಿ ಅಬ್ದುಲ್ಲಾ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ದಾಖಲಾಗುವ ಬಡವರಿಗೆ ಚಿಕಿತ್ಸೆ, ಔಷಧ ಸೇರಿದಂತೆ ಎಲ್ಲಾ ಸೇವೆಗಳನ್ನು ಉಚಿತವಾಗಿ ನೀಡಲಾಗುವುದು. ಈ ಆಸ್ಪತ್ರೆ ಸರ್ಕಾರಿ ಆಸ್ಪತ್ರೆಯಾಗಿಯೇ ಮುಂದುವರೆಯುತ್ತದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಉಡುಪಿ ನಗರ ಕೇಂದ್ರದಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿರುವ ಇಂದಿರಾ ಕ್ಯಾಂಟೀನ್ ಕಟ್ಟಡದ ಶಿಲಾನ್ಯಾಸವನ್ನು ಮುಖ್ಯಮಂತ್ರಿ ನೆರವೇರಿಸಿದರು.

ಇದೇ ಕಾರ್ಯಕ್ರಮದಲ್ಲಿ ಉಡುಪಿ ಜಿಲ್ಲೆಯನ್ನು ರಾಜ್ಯದ ಪ್ರಥಮ ಬಯಲು ಬಹಿರ್ದೆಸೆ ಮುಕ್ತ ಜಿಲ್ಲೆ ಎಂದು ಘೋಷಿಸಿದ ಮುಖ್ಯ ಮಂತ್ರಿಗಳು ಮುಂದಿನ ಅಕ್ಟೋಬರ್ 2ರ ವೇಳೆಗೆ ಇಡೀ ರಾಜ್ಯ ಬಯಲು ಬಹಿರ್ದೆಸೆ ಮುಕ್ತ ರಾಜ್ಯ ಆಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್ ರಮೇಶ್ ಕುಮಾರ್, ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ ಜಾರ್ಜ್, ವಿಧಾನ ಪರಿಷತ್ತ್ ಸಚಿವ ಐವನ್ ಡಿಸೋಜಾ, ಮುಖ್ಯ ಮಂತ್ರಿಗಳ ಸಂಸದೀಯ ಕಾರ್ಯದರ್ಶಿ ಗೋವಿಂದ ರಾಜು, ಬೈಂದೂರು ವಿಧಾನಸಭಾ ಶಾಸಕ ಹಾಗೂ ಕರ್ನಾಟಕ ರಾಜ್ಯ ರಸ್ತೆ ನಿಗಮದ ಅಧ್ಯಕ್ಷ ಕೆ. ಗೋಪಾಲ ಪೂಜಾರಿ, ಕಾಪು ಶಾಸಕ ವಿನಯ್ ಕುಮಾರ್ ಸೊರಕೆ, ರಾಜ್ಯ ಅಲ್ಪಸಂಖ್ಯಾತ ನಿಗಮದ ಅಧ್ಯಕ್ಷ ಎಂ.ಎ ಗಫೂರ್, ಉಡುಪಿ ನಗರಸಭೆಯ ಅಧ್ಯಕ್ಷ ಮೀನಾಕ್ಷಿ ಮಾಧವ ಬನ್ನಂಜೆ, ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನರಸಿಂಹ ಮೂರ್ತಿ, ಜಿಲ್ಲಾಧಿಕಾರಿ ಪ್ರಿಯಾಂಕಾ ಮೇರಿ ಫ್ರಾನ್ಸಿಸ್, ಪೋಲೀಸ್ ಅಧೀಕ್ಷಕ ಡಾ.ಸಂಜೀವ್ ಎಂ.ಪಾಟೀಲ್, ಜಿಲ್ಲಾ ಪಂಚಾಯತ್ ಸಿ.ಇ.ಒ ಶಿವಾನಂದ ಕಾಪಶಿ, ಉಡುಪಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜನಾರ್ಧನ ತೋನ್ಸೆ, ಬಿ.ಆರ್. ಎಸ್. ಸ್ವಾಸ್ತ್ಯ ಮತ್ತು ಸಂಶೋಧನೆಯ ಅಧ್ಯಕ್ಷ ಬಿ.ಆರ್ ಶೆಟ್ಟಿ, ಉಪಾಧ್ಯಕ್ಷ ಡಾ,ಸಿ. ಆರ್ ಶೆಟ್ಟಿ, ಸಲಹೆಗಾರ ಬಿ.ಎಸ್. ಶೆಟ್ಟಿ ಉಪಸ್ಥಿತರಿದ್ದರು.

ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಮೋದ್ ಮಧ್ವರಾಜ್ ಸ್ವಾಗತಿಸಿದರು.

ಬಳಿಕ ನಡೆದ ಮಹಿಳಾ ಮೀನುಗಾರರ ಸಮಾವೇಶ ಹಾಗೂ ಕುಂದಾಪುರದ ಸಾರ್ವಜನಿಕ ಸರಕಾರಿ ಆಸ್ಪತೆಯಲ್ಲಿ ನಿರ್ಮಿಸಲ್ಪಡುವ ಅತ್ಯಾಧುನಿಕ ಸೌಲಭ್ಯಗಳುಳ್ಳ 100 ಹಾಸಿಗೆಗಳ ನೂತನ ದಿ. ಶ್ರೀಮತಿ ಲಕ್ಷ್ಮೀ ಸೋಮ ಬಂಗೇರ ಹೆರಿಗೆ ವಿಭಾಗದ ಶಿಲಾನ್ಯಾಸ ಸಮಾರಂಭವನ್ನು ನೆರವೇರಿಸಿ ಮಾತನಾಡಿ, ಸರ್ಕಾರ ಆರೋಗ್ಯ ಸೇವೆಗೆ ಹೆಚ್ಚಿನ ಒತ್ತು ನೀಡಿದೆ ಎಂದರು.

ಮಹಿಳಾ ಮೀನುಗಾರರು ಈ ಸಂದರ್ಭದಲ್ಲಿ ನೀಡಿದ ಬೇಡಿಕೆಗಳನ್ನು ಈಡೇರಿಸುವ ಭರವಸೆಯನ್ನು ಅವರು ನೀಡಿದರು.

ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಮೋದ್ ಮಧ್ವರಾಜ್ ಅಧ್ಯಕ್ಷತೆ ವಹಿಸಿದ್ದರು.

ಮೀನುಗಾರರಿಗೆ ನೀಡಲು ಬಾಕಿ ಉಳಿದಿರುವ ಸಬ್ಸಿಡಿ ಮೊತ್ತವನ್ನು ಶೀಘ್ರವೇ ಬಿಡುಗಡೆ ಮಾಡಲಾಗುವುದು ಎಂದರು. ಸಭೆಯಲ್ಲಿ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

---------------------